## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಧಾನಸೌಧಕ್ಕೆ "Guided Tour" ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ.

**ಓದಲಾಗಿದೆ:** ಪ್ರವಾಸೋದ್ಯಮ ಇಲಾಖೆಯ ಕಡತ ಸಂಖ್ಯೆ: TOR 195 TDO 2024.

****

**ಪ್ರಸ್ತಾವನೆ:-**

ವಿಧಾನಸೌಧವು ಬೆಂಗಳೂರು ನಗರದ ಆಕರ್ಷಣೀಯ ಪ್ರವಾಸಿ ತಾಣಗಳಲ್ಲಿ ಒಂದಾಗಿದ್ದು, ಇತ್ತೀಚಿನ ದಿನಗಳಲ್ಲಿ ಬೆಂಗಳೂರಿಗೆ ಭೇಟಿ ನೀಡುವ ದೇಶಿಯ ಹಾಗೂ ವಿದೇಶಿಯ ಪ್ರವಾಸಿಗರು ವಿಧಾನಸೌಧಕ್ಕೆ ಭೇಟಿ ನೀಡಲು ಉತ್ಸುಕರಾಗಿದ್ದು, ಪ್ರತಿ ಪ್ರವಾಸಿಗರು ಕಟ್ಟಡದ ಹೊರ ಭಾಗದಲ್ಲಿ ನಿಂತು ವೀಕ್ಷಣೆ ಮಾಡುತ್ತಿದ್ದು, ಛಾಯಾ ಚಿತ್ರ ತೆಗೆದುಕೊಳ್ಳುತ್ತಾರೆ. ಇಲ್ಲಿಗೆ ಭೇಟಿ ನೀಡುವ ಸಾರ್ವಜನಿಕರು ಹಾಗೂ ಪ್ರವಾಸಿಗರಿಗೆ ಕಟ್ಟಡದ ಪಾರಂಪರಿಕತೆ, ಇತಿಹಾಸ ಹಾಗೂ ಮಹತ್ವವನ್ನು ತಿಳಿಸುವ ಮೂಲಕ ಕಟ್ಟಡದ ಆಕರ್ಷಣೆಯನ್ನು ಮತ್ತಷ್ಟು ಹೆಚ್ಚಿಸುವ ದೃಷ್ಟಿಯಿಂದ ದೆಹಲಿಯ ರಾಷ್ಟ್ರಪತಿ ಭವನ, ಪಾರ್ಲಿಮೆಂಟ್ ಕಟ್ಟಡಗಳಿಗೆ ಏರ್ಪಡಿಸಿರುವಂತೆ ವಿಧಾನಸೌಧಕ್ಕೂ ಸಹ "Guided Tour" ಏರ್ಪಡಿಸಿದಲ್ಲಿ ಪ್ರವಾಸಿಗರ ಗಮನ ಸೆಳೆಯಬಹುದಾಗಿದ್ದು, ಈ ಸಂಬಂಧ ವಿಧಾನಸೌಧಕ್ಕೆ Guided Tour" ವ್ಯವಸ್ಥೆ ಕಲ್ಪಿಸಲು ಅನುಮತಿ ನೀಡುವಂತೆ ಪ್ರವಾಸೋದ್ಯಮ ಇಲಾಖೆಯು ಪ್ರಸ್ತಾಪಿಸಿರುತ್ತದೆ.

ವಿಧಾನಸೌಧ ಕಟ್ಟಡಕ್ಕೆ ಪ್ರಸ್ತುತ ಶಾಶ್ವತ ದೀಪಾಲಂಕಾರ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ಇದರಿಂದ, ಕಟ್ಟಡದ ಸೌಂದರ್ಯವು ಹೆಚ್ಚುವುದರ ಮೂಲಕ ಪ್ರವಾಸಿಗರನ್ನು ಇನ್ನೂ ಹೆಚ್ಚಿನ ಮಟ್ಟದಲ್ಲಿ ಸೆಳೆಯಬಹುದಾಗಿದೆ, ಈ ಹಿನ್ನಲೆಯಲ್ಲಿ, ವಿಧಾನಸೌಧ ಕಟ್ಟಡ ವೀಕ್ಷಿಸಲು ಅವಕಾಶ ನೀಡಿ "Guided Tour" ಏರ್ಪಡಿಸಿದಲ್ಲಿ ದೇಶೀಯ ಪ್ರವಾಸಿಗರನ್ನೇ ಅಲ್ಲದೆ, ವಿದೇಶಿಯ ಪ್ರವಾಸಿಗರ ಗಮನವನ್ನು ಸೆಳೆದು, ವಿಧಾನಸೌಧವನ್ನು ಇನ್ನೂ ಆಕರ್ಷಣೀಯ ಕೇಂದ್ರವನ್ನಾಗಿಸಬಹುದು.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 143 ದಿಸಭೆ 2024,**

**ಬೆಂಗಳೂರು, ದಿನಾಂಕ: 04.04.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ವಿಧಾನಸೌಧಕ್ಕೆ "Guided Tour" ವ್ಯವಸ್ಥೆಯನ್ನು ಪ್ರವಾಸೋದ್ಯಮ ಇಲಾಖೆ ವತಿಯಿಂದ ಜಾರಿಗೆ ತರಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತು ಮತ್ತು ನಿಬಂಧನೆಗಳು:-**

1. ಸಾರ್ವತ್ರಿಕ ರಜಾ ದಿನಗಳಂದು ಮಾತ್ರ ಬೆಳಿಗ್ಗೆ 8.00 ರಿಂದ ಸಂಜೆ 6.00ರವರೆಗೆ "Guided Tour"

Scanned with CamScanner

ವ್ಯವಸ್ಥೆ ಕಲ್ಪಿಸಲಾಗುವುದು.

2. ವಿಧಾನಸೌಧ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರನ್ನು ತಲಾ 30 ರಂತೆ ತಂಡಗಳನ್ನಾಗಿ ವಿಭಜಿಸಿ, ವೀಕ್ಷಣೆಗೆ ಅವಕಾಶ ಕಲ್ಪಿಸುವುದು ಹಾಗೂ ಈ ಪ್ರತಿ ತಂಡಗಳ ಮೇಲ್ವಿಚಾರಣೆ ಮಾಡಲು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಅಧಿಕಾರಿಗಳನ್ನು (Tourist Officer) ಕಡ್ಡಾಯವಾಗಿ ನೇಮಿಸತಕ್ಕದ್ದು ಹಾಗೂ ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಇವರನ್ನು ಉಸ್ತುವಾರಿ ಅಧಿಕಾರಿಯನ್ನಾಗಿ ನೇಮಿಸುವುದು. ಪ್ರತಿ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರ ಸಂಖ್ಯೆ ಹಾಗೂ ವಿವರಗಳನ್ನು ಸಿಆಸುಇ(ಕಾರ್ಯಕಾರಿ) ಹಾಗೂ ವಿಧಾನಸೌಧದ ಭದ್ರತಾ ವಿಭಾಗಕ್ಕೆ ಆಯಾದಿನವೇ ಸಲ್ಲಿಸತಕ್ಕದ್ದು. Guided Tour ಗೆ ಅನುವಾಗುವಂತೆ ಪ್ರವಾಸಿಗರು Online ಮುಖಾಂತರ ticket ಪಡೆಯಲು ಪ್ರವಾಸೋದ್ಯಮ ಇಲಾಖೆಯಿಂದ ಒಂದು ತಂತ್ರಾಂಶ ಅಭಿವೃದ್ಧಿ ಪಡಿಸುವುದು.

3. ಪ್ರವಾಸಿಗರಿಗೆ ನಿಗದಿಪಡಿಸುವ ಪ್ರವೇಶ ದರವು ಜನಸ್ನೇಹಿಯಾಗಿರತಕ್ಕದ್ದು ಹಾಗೂ ವಸೂಲಿ ಮಾಡುವ ಪ್ರವೇಶ ಶುಲ್ಕದಲ್ಲಿ ನಿರ್ದಿಷ್ಟ ಶುಲ್ಕವನ್ನು ಸರ್ಕಾರದ ಲೆಕ್ಕಶೀರ್ಷಿಕೆ: <u>0070-60-800-0-04-000ಗೆ</u> ಪ್ರವಾಸೋದ್ಯಮ ಇಲಾಖೆಯು ಜಮಾ ಮಾಡತಕ್ಕದ್ದು.

4. ಉಪ ಪೊಲೀಸ್ ಆಯುಕ್ತರು, ವಿಧಾನಸೌಧ ಭದ್ರತೆ ಇವರು ಭದ್ರತೆಗೆ ಸಂಬಂಧಿಸಿದಂತೆ ನೀಡುವ ಸೂಚನೆಗಳನ್ನು ಪಾಲಿಸಲು ಬದ್ಧರಾಗಿರತಕ್ಕದ್ದು.

5. ಪ್ರವಾಸಿಗರ ಅಧಿಕೃತ ಗುರುತಿನ ಚೀಟಿಯನ್ನು ಪರಿಶೀಲಿಸಿ, ಪ್ರವೇಶಕ್ಕೆ ಅವಕಾಶ ಕಲ್ಪಿಸತಕ್ಕದ್ದು.

6. ವಿಧಾನಸೌಧ ಕಟ್ಟಡ/ ಉದ್ಯಾನವನಗಳು/ಪ್ರತಿಮೆಗಳಿಗೆ ಯಾವುದೇ ಧಕ್ಕೆ ಉಂಟಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಹಾಗೂ ಈ ಕುರಿತು ಅಗತ್ಯ ಸೂಚನಾ ಫಲಕಗಳನ್ನು ಅಳವಡಿಸಲು ಲೋಕೋಪಯೋಗಿ ಇಲಾಖೆಯು ಕ್ರಮವಹಿಸತಕ್ಕದ್ದು.

7. ವೀಕ್ಷಣೆಗೆ ಆಗಮಿಸುವ ಪ್ರವಾಸಿಗರ ಪರಿವೀಕ್ಷಣೆಯ ಕುರಿತು ರೂಟ್ ಮ್ಯಾಪ್ (Root Map/Lay out map) ಅನ್ನು ಲೋಕೋಪಯೋಗಿ ಇಲಾಖೆ/ವಿಧಾನಸೌಧ ಭದ್ರತಾ ವಿಭಾಗದೊಂದಿಗೆ ಸಮಾಲೋಚಿಸಿ ತಯಾರಿಸಿ ಕಡ್ಡಾಯವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅನುಮೋದನೆ ಪಡೆಯತಕ್ಕದ್ದು.

8. ಪರಿವೀಕ್ಷಣೆಯ ಸಂದರ್ಭದಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಸುಸಜ್ಜಿತ ವೈದ್ಯಕೀಯ ತಂಡದೊಂದಿಗೆ ಆಂಬ್ಯುಲೆನ್ಸ್ ಸೌಲಭ್ಯವನ್ನು ಕಲ್ಪಿಸಲು ಆರೋಗ್ಯ ಇಲಾಖೆಯು ಅಗತ್ಯ ಕ್ರಮವಹಿಸತಕ್ಕದ್ದು.

9. ಅಗ್ನಿ ಅವಘಡ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಗ್ನಿ ಶಾಮಕ ಇಲಾಖೆಯರು ಅಗತ್ಯ ಮುಂಜಾಗ್ರತಾ ಕ್ರಮ ವಹಿಸಲು ಸಿದ್ಧರಿರತಕ್ಕದ್ದು.

10. ಪ್ರವಾಸಿಗರು ಪಾಲಿಸಬೇಕಾದ ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಲು ಅಗತ್ಯ ಕ್ರಮವಹಿಸತಕ್ಕದ್ದು:

- ವೀಕ್ಷಣೆಗೆ ಆಗಮಿಸುವ ಪ್ರವಾಸಿಗರು ವಿಧಾನಸೌಧದ ಆವರಣದ ಸ್ವಚ್ಛತೆಯನ್ನು ಕಾಪಾಡಲು

Scanned with CamScanner

ಬದ್ಧರಾಗಿರತಕ್ಕದ್ದು

- ವಿಧಾನಸೌಧ ಕಟ್ಟಡದ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರು ಡ್ರೋನ್ ಕ್ಯಾಮರಾವನ್ನು ಬಳಸಲು ನಿಷೇಧಿಸಿದೆ.
- ಪರಿವೀಕ್ಷಣೆಯ ಸಂದರ್ಭದಲ್ಲಿ ಪ್ರವಾಸಿಗರು ಕುಡಿಯುವ ನೀರನ್ನು ಹೊರತು ಪಡಿಸಿ, ಇನ್ನುಳಿದ ಯಾವುದೇ ಆಹಾರ/ತಿಂಡಿ/ತಿನಿಸುಗಳನ್ನು ತರುವುದನ್ನು ನಿಷೇಧಿಸಲಾಗಿದೆ.
- ಕಡ್ಡಾಯವಾಗಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದೆ.
- ವಿಧಾನಸೌಧದ ಆವರಣದಲ್ಲಿ ವಾಹನ ನಿಲುಗಡೆಯನ್ನು ನಿಷೇಧಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಯದು ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)

ಇವರಿಗೆ

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ
3. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ
4. ಸರ್ಕಾರದ ಕಾರ್ಯದರ್ಶಿ, ಸಿಆಸುಇ, ವಿಧಾನಸೌಧ.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ.
7. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ
11. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
12. ಉಪ ಪೊಲೀಸ್ ಆಯುಕ್ತರು, ವಿಧಾನಸೌಧ ಭದ್ರತೆ, ವಿಧಾನಸೌಧ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ನಂ.1, ಕಟ್ಟಡಗಳ ವಿಭಾಗ, ಲೋಕೋಪಯೋಗಿ ಇಲಾಖೆ, ಎಸ್.ಜಿ.ಪಿ. ಆವರಣ, ಬೆಂಗಳೂರು.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.2, ಕಟ್ಟಡಗಳ ಉಪ ವಿಭಾಗ, ಲೋಕೋಪಯೋಗಿ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಟ್ಟಡಗಳ ಉಪ ವಿಭಾಗ, ಲೋಕೋಪಯೋಗಿ

Scanned with CamScanner

ಇಲಾಖೆ, ವಿಧಾನಸೌಧ ಸೌತ್ ಬ್ಲಾಕ್, ವಿಕಾಸಸೌಧ, ಬೆಂಗಳೂರು.

16. ಸಹಾಯಕ ಅಗ್ನಿ ಶಾಮಕ ಠಾಣಾಧಿಕಾರಿ, ವಿಧಾನಸೌಧ ಅಗ್ನಿ ನಿಯಂತ್ರಣ ಘಟಕ, ವಿಧಾನಸೌಧ,

17. ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ(ಕಬ್ಬನ್ ಪಾರ್ಕ್), ಬೆಂಗಳೂರು.

18. ಸಹಾಯಕ ತೋಟಗಾರಿಕಾ ನಿರ್ದೇಶಕರು, ತೋಟಗಾರಿಕೆ ಇಲಾಖೆ, ವಿಧಾನಸೌಧ.

19. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ. 5 ವಿದ್ಯುತ್ ವಿಭಾಗ, ಲೋಕೋಪಯೋಗಿ ಇಲಾಖೆ, ವಿಧಾನಸೌಧ.

20. ಶಾಖಾಧಿಕಾರಿ, ಸಿಆಸುಇ(ಕಾರ್ಯಕಾರಿ-ಬಿ), ವಿಧಾನಸೌಧ.

21. ಮೇಲ್ವಿಚಾರಕರು/ಭದ್ರತಾಧಿಕಾರಿ,ಸಿಆಸುಇ(ಕಾರ್ಯಕಾರಿ), ವಿಧಾನಸೌಧ/ವಿಕಾಸಸೌಧ.

22. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner